# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **832**

ಸದಸ್ಯರ ಹೆಸರು : ಶ್ರೀಮತಿ. ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : **19/08/2025**

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

| | *ಪ್ರಶ್ನೆ* | *ಉತ್ತರ* |
|---|---|---|
| ಅ | ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಇರುವ ನಿಯಮಗಳೇನು (ವಿವರ ನೀಡುವುದು); | ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆ ಅಧಿನಿಯಮ 1964 ರ ಸೆಕ್ಷನ್–349 ರಲ್ಲಿರುವಂತೆ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:<br>2011 ರ ಜನಗಣತಿಯನ್ವಯ–<br>1. ಅಂಥ ಪ್ರದೇಶದ ಜನಸಂಖ್ಯೆ ಹತ್ತು ಸಾವಿರಕ್ಕಿಂತ ಕಡಿಮೆಯಿಲ್ಲದ ಮತ್ತು ಇಪ್ಪತ್ತು ಸಾವಿರಕ್ಕಿಂತ ಹೆಚ್ಚಿಲ್ಲದ ಹೊರತು;<br>2. ಅಂಥ ಪ್ರದೇಶದಲ್ಲಿನ ಜನಸಂಖ್ಯೆಯ ಸಾಂದ್ರತೆಯು ಒಂದು ಚದರ ಕಿಲೋಮೀಟರ್ ಪ್ರದೇಶಕ್ಕೆ ನಾಲ್ಕುನೂರು ನಿವಾಸಿಗಳಿಗಿಂತ ಕಡಿಮೆಯಿಲ್ಲದ ಹೊರತು;<br>3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗದ ಶೇಕಡಾವಾರು ಒಟ್ಟು ಉದ್ಯೋಗದ ಶೇಕಡ ಐವತ್ತಕ್ಕಿಂತ ಕಡಿಮೆಯಿಲ್ಲದ ಹೊರತು;<br>• ಮೇಲ್ದರ್ಜೆಗೇರಿಸಲಾಗುವ ಪ್ರದೇಶವು ತಾಲೂಕು ಕೇಂದ್ರವಾಗಿದ್ದಲ್ಲಿ ಅಲ್ಲಿನ ಜನಸಂಖ್ಯೆ 10,000 ಕ್ಕಿಂತ ಕಡಿಮೆ ಇದ್ದರೂ ಸಹ ಪರಿಗಣಿಸಬಹುದಾಗಿದೆ;<br>• ದಿನಾಂಕ:19/03/2015 ರ ಸಚಿವ ಸಂಪುಟ ನಿರ್ಣಯದಂತೆ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಈ ಹಿಂದೆ ಕ್ರಮವಹಿಸಲಾಗಿದ್ದು, ಪ್ರಸ್ತುತ ಅಧಿನಿಯಮದ ಮಾನದಂಡವನ್ನು ಪರಿಗಣಿಸಲಾಗುತ್ತಿದೆ. |
| ಆ | ಹೊಳೆಹೊನ್ನೂರು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಯಾವ ಯಾವ ಗ್ರಾಮ ಪಂಚಾಯಿತಿಗಳ ಗ್ರಾಮಗಳನ್ನು ಸೇರಿಸಿಕೊಳ್ಳಲಾಗಿದೆ; | ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 99 ಎಂಎಲ್ಆರ್ 2020; ದಿನಾಂಕ:17/02/2021 ರನ್ವಯ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲೂಕಿನ ಹೊಳೆಹೊನ್ನೂರು ಪಟ್ಟಣ ಪಂಚಾಯತಿಯನ್ನು ರಚಿಸಲಾಗಿದ್ದು, ಈ ಕೆಳಕಂಡ ಗ್ರಾಮಗಳನ್ನು ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಸೇರ್ಪಡೆಗೊಳಿಸಲಾಗಿರುತ್ತದೆ:<br>1. ಹನುಮಂತಾಪುರ ಗ್ರಾಮ ಪಂಚಾಯಿತಿಯ ಜಂಬರಘಟ್ಟ ಗ್ರಾಮ |

| | | |
|---|---|---|
| | | 2. ಎಮ್ಮೆ ಹಟ್ಟಿ ಗ್ರಾಮ ಪಂಚಾಯಿತಿ<br>3. ಸಿದ್ಧಿಪುರ ಗ್ರಾಮ ಪಂಚಾಯಿತಿಯ ಡಣಾಯಕಪುರ ಗ್ರಾಮ |
| ಇ | ಹೊಳೆಹೊನ್ನೂರು ಪಟ್ಟಣ ಪಂಚಾಯಿತಿಗೆ ಸೇರ್ಪಡೆಗೊಂಡ ಗ್ರಾಮ ಪಂಚಾಯಿತಿಯ ಗ್ರಾಮಗಳನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು) | ಹೊಳೆಹೊನ್ನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಸೇರ್ಪಡೆಗೊಳಿಸಿರುವ ಗ್ರಾಮಗಳನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |

**ಸಂಖ್ಯೆ:ನಅಇ 34 ಎಲ್‌ಸಿಕ್ಯೂ 2025**

(ರಹೀಂ ಖಾನ್)

ಪೌರಾಡಳಿತ ಹಾಗೂ ಹಜ್ ಸಚಿವರು